**Akashvani : Bangalore**
**Regional Bulletin In Kannada**
**07.06.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**<><*<><>*><>**

ಮುಖ್ಯಾಂಶಗಳು

**೧. ಆಗ್ನೇಯ ಶಿಕ್ಷಕರ ಕ್ಷೇತ್ರ; ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್‌ಗೆ ಜಯ**

**೨. ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ; ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ನಾಯಕ ಡಾ.ಸಿ.ಎನ್.ಅಶ್ವತ್ಥ ನಾರಾಯಣ ಒತ್ತಾಯ**

**೩. ಉತ್ತರಾಖಂಡದಿಂದ ಬೆಂಗಳೂರಿಗೆ ಆಗಮಿಸಿದ ಮೃತ ಚಾರಣಿಗರ ಪಾರ್ಥೀವ ಶರೀರ ಕುಟುಂಬಸ್ಥರಿಗೆ ಹಸ್ತಾಂತರ**

**೪. ಇಡೀ ರಾಜ್ಯ ಆವರಿಸಿದ ನೈಋತ್ಯ ಮುಂಗಾರು; ದಕ್ಷಿಣ ಒಳನಾಡಿನಲ್ಲಿ ಧಾರಾಕಾರ ಮಳೆ**

**<><*<><>*><>**

ಬೆಂಗಳೂರಿನಲ್ಲಿ ನಿನ್ನೆ ನಡೆದ ಆಗ್ನೇಯ ಶಿಕ್ಷಕರ ಕ್ಷೇತ್ರದ ಮತ ಎಣಿಕೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ ಜಯ ಸಾಧಿಸಿದ್ದಾರೆ. ಅವರು ತಮ್ಮ ಸಮೀಪದ ಪ್ರತಿಸ್ಪರ್ಧಿ ಬಿಜೆಪಿ ಅಭ್ಯರ್ಥಿ ಡಾ.ವೈ.ಎ.ನಾರಾಯಣಸ್ವಾಮಿ ಅವರಿಗಿಂತ ೧ ಸಾವಿರದ ೮೬೦ ಮತಗಳ ಅಂತರದಿಂದ ಗೆಲುವು ದಾಖಲಿಸಿದ್ದಾರೆ. ಡಿ.ಟಿ.ಶ್ರೀನಿವಾಸ್ ೭ ಸಾವಿರದ ೯೪೩ ಮತಗಳು, ಡಾ.ವೈ.ಎ.ನಾರಾಯಣಸ್ವಾಮಿ ೬ ಸಾವಿರದ ೩೫೮ ಮತಗಳು ಮತ್ತು ಪಕ್ಷೇತರ ಅಭ್ಯರ್ಥಿ ಶಿವರಾಜ್ ೫ ಸಾವಿರದ ೫೭೫ ಮತಗಳನ್ನು ಪಡೆದಿದ್ದಾರೆ. ಡಿ.ಟಿ.ಶ್ರೀನಿವಾಸ್ ಅವರು, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಧ್ಯನ್ಯವಾದ ಸಲ್ಲಿಸಿದರು. ಇದೇ ವೇಳೆ ಶ್ರೀನಿವಾಸ್ ಅವರನ್ನು ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೆವಾಲ ಅಭಿನಂದನೆ ಸಲ್ಲಿಸಿದರು.

**<><*<><>*><>**

ವಾಲ್ಮೀಕಿ ಅಭಿವೃದ್ಧಿ ನಿಗಮದ ೧೮೭ ಕೋಟಿ ರೂಪಾಯಿ ಹಗರಣವನ್ನು ಮುಚ್ಚಿ ಹಾಕಲು ಕೆಪಿಸಿಸಿ ಕಚೇರಿಯಲ್ಲಿ ಸಭೆ ನಡೆಸಲು ರಾಹುಲ್ ಗಾಂಧಿಯವರು ರಾಜ್ಯಕ್ಕೆ ಆಗಮಿಸಿದ್ದಾರೆಯೇ? ಅಥವಾ ಮುಖ್ಯಮಂತ್ರಿಯವರ ರಾಜೀನಾಮೆ ಪಡೆಯಲು ಅವರು ಸಭೆ ಕರೆದಿದ್ದಾರೆಯೇ ಎಂದು ಮಾಜಿ ಉಪ ಮುಖ್ಯಮಂತ್ರಿ ಡಾ. ಸಿ.ಎನ್.ಅಶ್ವತ್ಥನಾರಾಯಣ್ ಬೆಂಗಳೂರಿನಲ್ಲಿಂದು ಪ್ರಶ್ನಿಸಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇಡೀ ರಾಜ್ಯ ಸರಕಾರವೇ ಭ್ರಷ್ಟಾಚಾರದಲ್ಲಿದೆ.

ದಲಿತರ ಹಣ ಬೇರೆ ರಾಜ್ಯಕ್ಕೆ ವರ್ಗಾವಣೆ, ಸಾಕ್ಷಿ ನಾಶಕ್ಕೆ ನಿಮ್ಮಲ್ಲಿ ಏನು ಉತ್ತರ ಇದೆ? ಎಂದು ಪ್ರಶ್ನಿಸಿದ ಅವರು, ಸಿದ್ದರಾಮಯ್ಯ ಅವರಿಗೆ ನೈತಿಕತೆ, ಮೌಲ್ಯ ಇದ್ದರೆ, ನಿಮ್ಮ ಅನುಭವಕ್ಕೆ ಗೌರವ ಇದ್ದರೆ, ಮೊದಲು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿ ಎಂದು ಒತ್ತಾಯಿಸಿದರು.

<><*<><>*><>

ಇಂದು ವಿಶ್ವ ಆಹಾರ ಸುರಕ್ಷತಾ ದಿನ. ಆಹಾರ ಸುರಕ್ಷತೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. ಹಕ್ಕೆ ಒಗ್ಗುವ ಪೌಷ್ಠಿಕಾಂಶಯುಕ್ತ ಆಹಾರವನ್ನು ಸೇವಿಸಿ, ಆರೋಗ್ಯವನ್ನು ಕಾಪಾಡಿಕೊಳ್ಳಿ. ಇತ್ತೀಚಿನ ವರ್ಷಗಳಲ್ಲಿ ಬದಲಾದ ಜೀವನ ಶೈಲಿ, ಆಹಾರ ಪದ್ಧತಿಗಳು ಅನಾರೋಗ್ಯವನ್ನು ಆಹ್ವಾನಿಸುತ್ತಿದೆ. ದಿನನಿತ್ಯ ವ್ಯಾಯಾಮ ಮಾಡುವುದು, ದುಷ್ಚಟಗಳಿಂದ ಮುಕ್ತರಾಗಿ, ಉತ್ತಮ ಅಭ್ಯಾಸ ರೂಢಿಸಿಕೊಳ್ಳುವುದು, ದೇಹಕ್ಕೆ ಒಗ್ಗುವ ಆಹಾರ ಸೇವನೆಗಳಿಂದ ರೋಗಮುಕ್ತ ಜೀವನ ನಡೆಸಲು ಸಾಧ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><*<><>*><>

ಉತ್ತರಾಖಂಡದ ಸಹಸ್ರ ತಾಲ್‌ನಲ್ಲಿ ಚಾರಣ ಮಾಡುವಾಗ ದುರಾದೃಷ್ಟವಶಾತ್ ಹವಾಮಾನ ವೈಪರೀತ್ಯದಿಂದ ಅಸುನೀಗಿದ ೯ ಚಾರಣಿಗರ ಮೃತದೇಹಗಳ ಹೊತ್ತ ವಿಮಾನ ಇಂದು ಬೆಂಗಳೂರಿನ ವಿಮಾನ ನಿಲ್ದಾಣಕ್ಕೆ ಆಗಮಿಸಿತು. ಮೃತದೇಹಗಳನ್ನು ಕುಟುಂಬಸ್ಥರಿಗೆ ಹಸ್ತಾಂತರಿಸಲಾಯಿತು. ಮೃತರ ಕುಟುಂಬಗಳಿಗೆ ಸಚಿವ ಕೃಷ್ಣ ಭೈರೇಗೌಡ ಸಾಂತ್ವನ ಹೇಳಿದರು. ಮತ್ತೊಂದೆಡೆ, ಚಾರಣಕ್ಕೆ ತೆರಳಿ ಅಪಾಯಕ್ಕೆ ಸಿಲುಕಿದ್ದ ಚಾರಣಿಗರ ಪೈಕಿ, ರಕ್ಷಿಸಲ್ಪಟ್ಟ ೧೩ ಮಂದಿ ನಿನ್ನೆ ತಡರಾತ್ರಿ ಬೆಂಗಳೂರಿಗೆ ಆಗಮಿಸಿದ್ದಾರೆ. ಸಚಿವ ಕೃಷ್ಣಭೈರೇಗೌಡ ಅವರ ಜೊತೆ ವಿಮಾನದಲ್ಲಿ ೧೩ ಮಂದಿ ಕನ್ನಡಿಗರು ದೇವನಹಳ್ಳಿಯ ಕೆಂಪೇಗೌಡ ಅಂತಾರಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸಿದ್ದಾರೆ. ವಿಮಾನ ನಿಲ್ದಾಣದ ಬಳಿ ಕಾದಿದ್ದ ಅವರ ಕುಟುಂಬಸ್ಥರು, ಸುರಕ್ಷಿತವಾಗಿ ಬಂದ ಚಾರಣಿಗರನ್ನು ಸ್ವಾಗತಿಸಿದರು. ಇದೇ ವೇಳೆ, ಸ್ವತಃ ಸ್ಥಳಕ್ಕೆ ತೆರಳಿ ರಕ್ಷಣಾ ಕಾರ್ಯದ ಉಸ್ತುವಾರಿ ವಹಿಸಿದ್ದ ಸಚಿವ ಕೃಷ್ಣ ಭೈರೇಗೌಡ ಅವರಿಗೆ ಕರ್ನಾಟಕ ಪರ್ವತಾರೋಹಣ ಸಂಘದ ಸದಸ್ಯರು ಧನ್ಯವಾದ ತಿಳಿಸಿದರು.

<><*<><>*><>

ರಾಜೀ ಸಂಧಾನದ ಮೂಲಕ ಸೌಹಾರ್ದಯುತವಾಗಿ ಪ್ರಕರಣಗಳನ್ನು ಇತ್ಯರ್ಥ ಪಡಿಸುವುದು ಲೋಕ್ ಆದಾಲತ್ ಅಥವಾ ಜನತಾ ನ್ಯಾಯಾಲಯದ ಮೂಲ ಉದ್ದೇಶವಾಗಿದೆ. ಜುಲೈ ೧೩ರಂದು ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದ್ದು, ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಚಿತ್ರದುರ್ಗ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾದೀಶ

ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ರೋಣ್ ವಾಸುದೇವ್ ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜೀ ಸಂಧಾನದ ಮೂಲಕ ತಮ್ಮ ಪ್ರಕರಣಗಳನ್ನು ಸುಲಭ ಹಾಗೂ ಶೀಘ್ರವಾಗಿ ಯಾವುದೇ ಶುಲ್ಕ, ಖರ್ಚು ವೆಚ್ಚವಿಲ್ಲದೇ ತೀರ್ಮಾನ ಮಾಡಿಕೊಳ್ಳಬಹುದು. ಜನತಾ ನ್ಯಾಯಾಲಯದಲ್ಲಿ ಒಬ್ಬರು ಹಾಲಿ ನ್ಯಾಯಾಧೀಶರು ಹಾಗೂ ನುರಿತ ವಕೀಲರು ಸಂಧಾನಕಾರರಾಗಿ ಇರುತ್ತಾರೆ. ನ್ಯಾಯಾಲಯದಲ್ಲಿ ಚಾಲ್ತಿ ಇರುವ ಪ್ರಕರಣಗಳನ್ನು ಹಾಗೂ ಇನ್ನೂ ನ್ಯಾಯಾಲಯ ಪ್ರವೇಶಿಸದೇ ಇರುವಂತಹ ಪ್ರಕರಣಗಳನ್ನು ಸಹ ಜನತಾ ನ್ಯಾಯಾಲಯದಲ್ಲಿ ಪರಿಹರಿಸಿಕೊಳ್ಳಬಹುದು ಎಂದರು. ರಾಷ್ಟ್ರೀಯ ಹಾಗೂ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಸೂಚನೆಯಂತೆ ಜುಲೈ ೧೩ ರಂದು ಜಿಲ್ಲಾ ಹಾಗೂ ತಾಲೂಕು ನ್ಯಾಯಾಲಯಗಳಲ್ಲಿ ಬೃಹತ್ ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ. ಕಕ್ಷಿದಾರರು ಇದರ ಉಪಯೋಗ ಪಡೆದುಕೊಳ್ಳಬೇಕು ಎಂದು ನ್ಯಾಯಾಧೀಶ್ ರೋಣ್ ವಾಸುದೇವ್ ಮನವಿ ಮಾಡಿದರು.

<><*<><>*><>

ಉಪ ಲೋಕಾಯುಕ್ತ, ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಇದೇ ೧೪ ರಿಂದ ೧೬ ರವರೆಗೆ ಗದಗ ಜಿಲ್ಲೆ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಲೋಕಾಯುಕ್ತ ಕಾರ್ಯಾಲಯದ ಉಪ ಪೋಲಿಸ್ ಅಧೀಕ್ಷಕ ವಿಜಯ ಬಿರಾದಾರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಇದೇ ೧೪ ರಂದು ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಾರ್ವಜನಿಕರ ಕುಂದು-ಕೊರತೆಗಳ ಅಹವಾಲು ಸ್ವೀಕಾರ ಮತ್ತು ವಿಚಾರಣೆ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಸರ್ಕಾರಿ ಅಧಿಕಾರಿ, ನೌಕರರಿಂದ ಕಾನೂನು ರೀತ್ಯ ಆಗಬೇಕಾದ ಕೆಲಸದಲ್ಲಿ ವಿಳಂಬ, ಮುಂತಾದ ತೊಂದರೆಗೊಳಗಾದ ಸಾರ್ವಜನಿಕರು, ಅಹವಾಲುಗಳನ್ನು ಲಿಖಿತ ರೂಪದಲ್ಲಿ ಸಲ್ಲಿಸಬಹುದಾಗಿದೆ. ಇದೇ ೧೫ರಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜಿಲ್ಲೆಗೆ ಸಂಬಂಧಪಟ್ಟಂತೆ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ಬಾಕಿ ಇರುವ ಪ್ರಕರಣಗಳ ವಿಚಾರಣೆಯನ್ನು ಉಪ ಲೋಕಾಯುಕ್ತರು ನಡೆಸಲಿದ್ದಾರೆ.

<><*<><>*><>

ಸಿಇಟಿ ಮತ್ತು ನೀಟ್ ಪರೀಕ್ಷೆ ಬರೆದ ವಿದ್ಯಾರ್ಥಿಗಳಿಗೆ ದಾಖಲೆಗಳ ಪರಿಶೀಲನೆಗೆ ಹಾಗೂ ಇನ್ನಿತರ ದಾಖಲೆಯ ಅಪ್‌ಲೋಡ್‌ಗೆ ಮತ್ತೊಮ್ಮೆ ಅವಕಾಶ ನೀಡುವಂತೆ ಒತ್ತಾಯಿಸಿ ಶಿವಮೊಗ್ಗದಲ್ಲಿಂದು ಯೂತ್ ಕಾಂಗ್ರೆಸ್ ಕಾರ್ಯಕರ್ತರು ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಿದರು. ಕೂಡಲೇ ಸರ್ಕಾರ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ನಿರ್ದೇಶನವನ್ನು ನೀಡಿ, ವಿದ್ಯಾರ್ಥಿಗಳಿಗೆ ಉಂಟಾಗಿರುವ ಗೊಂದಲ ಮತ್ತು ಸಮಸ್ಯೆಗೆ ಪರಿಹಾರ ನೀಡಬೇಕು. ಸಿಇಟಿ ಮತ್ತು ನೀಟ್ ವಿದ್ಯಾರ್ಥಿಗಳಿಗೆ

ದಾಖಲೆ ಪರಿಶೀಲನೆ ಪ್ರಮಾಣ ಪತ್ರಗಳ ಅಪ್ಲೋಡ್‌ಗೆ ಹಾಗೂ ತಿದ್ದುಪಡಿಗೆ ಕಾಲಾವಕಾಶ ನೀಡಬೇಕೆಂದು ಯೂತ್ ಕಾಂಗ್ರೆಸ್ ಕಾರ್ಯಕರ್ತರು ಆಗ್ರಹಿಸಿದರು.

<><*<><>*><>

ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಜಂಬಯ್ಯನಕೆರೆ ಬಳಿ ರಾಷ್ಟ್ರೀಯ ಹೆದ್ದಾರಿ ೫೦ ರಲ್ಲಿ ಇಂದು ಬೆಳಗ್ಗೆ ಖಾಸಗಿ ಬಸ್ ಮತ್ತು ಲಾರಿ ನಡುವೆ ಅಪಘಾತವಾಗಿದೆ. ಘಟನೆಯಲ್ಲಿ ಒಬ್ಬರು ಮೃತಪಟ್ಟಿದ್ದು, ಕೆಲವರಿಗೆ ಗಾಯಗಳಾಗಿವೆ. ಬೆಂಗಳೂರಿನಿಂದ ಹೊಸಪೇಟೆ ಕಡೆಗೆ ಬರುತ್ತಿದ್ದ ಖಾಸಗಿ ಬಸ್ ಹಾಗೂ ಹೊಸಪೇಟೆಯಿಂದ ಕೂಡ್ಲಿಗಿ ಕಡೆಗೆ ಹೊರಟಿದ್ದ ಲಾರಿ ಮಧ್ಯೆ ಅಪಘಾತ ಸಂಭವಿಸಿದೆ. ಸುರಪುರ ತಾಲೂಕಿನ ಮೂವತ್ತೆರಡು ವರ್ಷದ ಮೈನುದ್ದೀನ್ ಮೃತರು. ಮರಿಯಮ್ಮನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದೂರು ದಾಖಲಾಗಿದೆ.

<><*<><>*><>

ವಿಜಯನಗರ ಜಿಲ್ಲೆಯ ಹೊಸಪೇಟೆ ತಾಲೂಕಿನ ಜಂಬಯ್ಯನಕೆರೆ ಬಳಿ ರಾಷ್ಟ್ರೀಯ ಹೆದ್ದಾರಿ ೫೦ ರಲ್ಲಿ ಇಂದು ಬೆಳಗ್ಗೆ ಖಾಸಗಿ ಬಸ್ ಮತ್ತು ಲಾರಿ ನಡುವೆ ಅಪಘಾತವಾಗಿದೆ. ಘಟನೆಯಲ್ಲಿ ಒಬ್ಬರು ಮೃತಪಟ್ಟಿದ್ದು, ಕೆಲವರಿಗೆ ಗಾಯಗಳಾಗಿವೆ. ಬೆಂಗಳೂರಿನಿಂದ ಹೊಸಪೇಟೆ ಕಡೆಗೆ ಬರುತ್ತಿದ್ದ ಖಾಸಗಿ ಬಸ್ ಹಾಗೂ ಹೊಸಪೇಟೆಯಿಂದ ಕೂಡ್ಲಿಗಿ ಕಡೆಗೆ ಹೊರಟಿದ್ದ ಲಾರಿ ಮಧ್ಯೆ ಅಪಘಾತ ಸಂಭವಿಸಿದೆ. ಸುರಪುರ ತಾಲೂಕಿನ ಮೂವತ್ತೆರಡು ವರ್ಷದ ಮೈನುದ್ದೀನ್ ಮೃತರು. ಮರಿಯಮ್ಮನಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದೂರು ದಾಖಲಾಗಿದೆ.

<><*<><>*><>

ಬಾಲ್ಯ ವಿವಾಹ ಪ್ರಕರಣ ಕಂಡುಬಂದಾಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹಾಗೂ ಬಾಲ್ಯ ವಿವಾಹ ನಿಷೇಧಾಧಿಕಾರಿ, ಅದಕ್ಕೆ ತಡೆಯಾಜ್ಞೆ ತರಬೇಕು ಎಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೊಳ ಅವರು ಅಧಿಕಾರಿಗಳಿಗೆ ಸೂಚಿಸಿದರು. ಯಾದಗಿರಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಕ್ಕಳ ರಕ್ಷಣಾ ಸಮಿತಿಯ ಸಭೆಯಲ್ಲಿ ಮಾತನಾಡಿದ ಅವರು, ಬಾಲ್ಯ ವಿವಾಹ ಪ್ರಕರಣ ಕಂಡುಬಂದಾಗ ಸಿಡಿಪಿಒ ಗಳು ತಕ್ಷಣವೇ ಮುಂದಾಳತ್ವ ವಹಿಸಿಕೊಂಡು ಸಂಬಂಧಿಸಿದ ಇಲಾಖೆಗಳ ಸಮನ್ವಯದ ಜೊತೆಗೆ ಬಾಲ್ಯ ವಿವಾಹ ತಡೆಗೆ ಅರಿವು ಮೂಡಿಸಬೇಕು. ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಒಟ್ಟು ೫೯ ಬಾಲ್ಯವಿವಾಹಗಳನ್ನು ತಡೆಯಲಾಗಿದೆ ಎಂದರು. ಜಿಲ್ಲೆಯಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ, ಅವರನ್ನು ಮರಳಿ ತರಗತಿಗಳಿಗೆ ಕರೆತರಲು ಅಗತ್ಯ ಕ್ರಮ ವಹಿಸಿಬೇಕು ಎಂದು ಅಪರ ಜಿಲ್ಲಾಧಿಕಾರಿ ಸೂಚಿಸಿದರು.

<><*<><>*><>

ಕಾರ್ಮಿಕ ಇಲಾಖೆ ಅಧಿಕಾರಿಗಳು ಇನ್ನೂ ಕ್ರಿಯಾಶೀಲವಾಗಿ ಕೆಲಸ ಮಾಡಬೇಕು. ಬಾಲ ಕಾರ್ಮಿಕರು ಪತ್ತೆಯಾದ ಪ್ರಕರಣಗಳಲ್ಲಿ ದುಡಿಸಿಕೊಳ್ಳುವ ಮಾಲೀಕನೊಂದಿಗೆ ಪತ್ತೆಯಾದ ಮಕ್ಕಳ ಪಾಲಕರ ವಿರುದ್ಧವು ಪ್ರಕರಣ ದಾಖಲಿಸಿ, ಅವರ ವಿರುದ್ಧ ಸಹ ಕ್ರಮಕೈಗೊಳ್ಳಬೇಕು ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸಂಘ ಮತ್ತು ಟಾಸ್ಕಫೋರ್ಸ್ ಸಮಿತಿ ಅಧ್ಯಕ್ಷರು ಆಗಿರುವ ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದ್ದಾರೆ. ಧಾರವಾಡದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಇಲ್ಲಿನ ಸಣ್ಣ, ಮಧ್ಯಮ ಉದ್ಯಮಗಳಲ್ಲಿ ಮಕ್ಕಳನ್ನು ಕೆಲಸಕ್ಕೆ ಬಳಕೆ ಮಾಡಿಕೊಳ್ಳುತ್ತಾರೆ. ಇದರಿಂದ ಮಕ್ಕಳ ಶೈಕ್ಷಣಿಕ, ದೈಹಿಕ ಬೆಳವಣಿಗೆ ಕುಂಠಿತಗೊಳ್ಳುತ್ತದೆ. ಆದ್ದರಿಂದ ಅಧಿಕಾರಿಗಳು ಹೋಟೆಲ್, ಬೇಕರಿ, ಖಾನಾವಳಿ ಸೇರಿದಂತೆ ಇತರೆ ಉದ್ಯಮ ಸ್ಥಳಗಳ ಮೇಲೆ ನಿರಂತರ ದಾಳಿ ಮಾಡಿ, ಮಕ್ಕಳನ್ನು ರಕ್ಷಿಸಬೇಕು. ಮಕ್ಕಳ ಸಹಾಯವಾಣಿ ೧೦೯೮ ರ ಬಗ್ಗೆ ವ್ಯಾಪಕ ಪ್ರಚಾರ ನಡೆಸಬೇಕು ಎಂದು ಸೂಚಿಸಿದರು.

<><*<><>*><>

ನೈಋತ್ಯ ಮುಂಗಾರು ಇಂದು ಇಡೀ ರಾಜ್ಯವನ್ನು ಆವರಿಸಿತು. ರಾಜ್ಯದ ದಕ್ಷಿಣ ಒಳನಾಡಿನ ಹಲವು ಕಡೆ ಭಾರೀ ಮಳೆಯಾಗಿದ್ದು, ಕರಾವಳಿ ಹಾಗೂ ಉತ್ತರ ಒಳನಾಡಿನ ಬಹುತೇಕ ಕಡೆಗಳಲ್ಲಿ ಮಳೆಯಾಗಿದೆ. ದಕ್ಷಿಣ ಒಳನಾಡಿನಲ್ಲಿ ಭಾರೀ ಮಳೆಯಾಗಿದ್ದು, ಮೈಸೂರು ಜಿಲ್ಲೆ ಎಚ್.ಡಿ.ಕೋಟೆಯಲ್ಲಿ ೧೦ ಸೆಂಟಿ ಮೀಟರ್, ಶಿವಮೊಗ್ಗ ಹಾಗೂ ಆಗುಂಬೆಯಲ್ಲಿ ತಲಾ ೯, ಚಿಕ್ಕಬಳ್ಳಾಪುರದ ಚಿಂತಾಮಣಿ, ಚಿತ್ರದುರ್ಗದ ನಾಯಕನಹಟ್ಟಿಯಲ್ಲಿ ತಲಾ ೮ ಸೆಂಟಿಮೀಟರ್ ಮಳೆಯಾಗಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕರಾವಳಿಯ ಉತ್ತರ ಕನ್ನಡ ಜಿಲ್ಲೆಯ ಮಂಕಿಯಲ್ಲಿ ೮ ಸೆಂಟಿಮೀಟರ್ ಮಳೆಯಾಗಿದ್ದು, ಉಡುಪಿ ಜಿಲ್ಲೆಯ ಸಿದ್ಧಾಪುರದಲ್ಲಿ ೬, ಉತ್ತರ ಕನ್ನಡದ ಗೋಕರ್ಣದಲ್ಲಿ ಹಾಗೂ ಉಡುಪಿಯ ಕುಂದಾಪುರದಲ್ಲಿ ತಲಾ ೪ ಸೆಂಟಿಮೀಟರ್ ಮಳೆಯಾಗಿದೆ. ಉತ್ತರ ಒಳನಾಡಿನಲ್ಲೂ ಮಳೆಯಾಗಿದ್ದು, ಬೆಳಗಾವಿ ಜಿಲ್ಲೆಯ ಗೋಕಾಕ್, ಬೈಲ್‌ಹೊಂಗಲ, ಬಾಗಲಕೋಟೆ ಜಿಲ್ಲೆಯ ಬಾದಾಮಿಯಲ್ಲಿ ೯ ಸೆಂಟಿಮೀಟರ್, ವಿಜಯಪುರ, ಯಲಬುರ್ಗಾ, ಗದಗ್ ಜಿಲ್ಲೆಯ ನರಗುಂದಾ, ಯಾದಗಿರಿ ಜಿಲ್ಲೆಯ ಹುಣಸಗಿಯಲ್ಲಿ ತಲಾ ೭ ಸೆಂಟಿಮೀಟರ್ ಮಳೆಯಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಳಗಾವಿ, ಧಾರವಾಡ, ಗಗದ, ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಬಾಗಲಕೋಟೆ, ಹಾವೇರಿ, ಕಲಬುರಗಿ, ವಿಜಯಪುರ, ಕೊಪ್ಪಳ, ಚಿಕ್ಕಮಗಳೂರು, ಹಾಸನ, ಕೊಡಗು, ಶಿವಮೊಗ್ಗ, ಚಿಕ್ಕಬಳ್ಳಾಪುರ ಜಿಲ್ಲೆಗಳ ಹಲವಡೆ ಗುಡುಗು ಸಹಿತ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಚಂಡಮಾರುತವು ಗಂಟೆಗೆ ೪೫ ಕಿಲೋ ಮೀಟರ್‌ನಿಂದ ೬೫ ಕಿಲೋ ಮೀಟರ್‌ವರೆಗೆ ಬೀಸುವ ಸಂಭವ ಇರುವುದರಿಂದ ರಾಜ್ಯದ ಕರಾವಳಿ ಉದ್ದಕ್ಕೂ ಮುಂದಿನ ೪೮ ಗಂಟೆಗಳು ಸಮುದ್ರಕ್ಕೆ

ಇಳಿಯದಂತೆ ಮೀನುಗಾರರಿಗೆ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಮುಂದಿನ ೨೪ ಗಂಟೆಗಳು ಸಾಮಾನ್ಯವಾಗಿ ಮೋಡ ಕವಿದ ಆಕಾಶ. ಹಗುರದಿಂದ ಸಾಧಾರಣ ಮಳೆ. ಕೆಲವೆಡೆ ಗುಡುಗು ಸಹಿತ ಮಳೆಯಾಗುವ ಸಂಭವವಿದೆ. ಗರಿಷ್ಠ ತಾಪಮಾನ ೩೦ ಡಿಗ್ರಿ ಸೆಲ್ಶಿಯಸ್ ಮತ್ತು ಕನಿಷ್ಠ ತಾಪಮಾನ ೨೧ ಡಿಗ್ರಿ ಸೆಲ್ಶಿಯಸ್ ಸಾಧ್ಯತೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**